ನಾನು ಪ್ರವಾದಿಯವರನ್ನು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅವರ ಕಿರುನಾಲಗೆ ಕಾಣುವ ರೀತಿಯಲ್ಲಿ ಪೂರ್ಣವಾಗಿ ನಗುವುದನ್ನು ನೋಡಿಲ್ಲ, ಬದಲಿಗೆ, ಅವರು ಕೇವಲ ಮಂದಹಾಸ ಬೀರುತ್ತಿದ್ದರು

ಸತ್ಯವಿಶ್ವಾಸಿಗಳ ಮಾತೆ ಆಯಿಶ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: "ನಾನು ಪ್ರವಾದಿಯವರನ್ನು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅವರ ಕಿರುನಾಲಗೆ ಕಾಣುವ ರೀತಿಯಲ್ಲಿ ಪೂರ್ಣವಾಗಿ ನಗುವುದನ್ನು ನೋಡಿಲ್ಲ, ಬದಲಿಗೆ, ಅವರು ಕೇವಲ ಮಂದಹಾಸ ಬೀರುತ್ತಿದ್ದರು."
[صحيح] [متفق عليه]

ಆಯಿಶ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ತಿಳಿಸುವುದೇನೆಂದರೆ, ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅವರ ಕಿರುನಾಲಗೆ ಕಾಣುವ ರೀತಿಯಲ್ಲಿ ಅತಿಯಾಗಿ ನಗುತ್ತಿರಲಿಲ್ಲ. ಕಿರುನಾಲಗೆ ಎಂದರೆ ಗಂಟಲಿನ ಮೇಲ್ಭಾಗದಲ್ಲಿ ನೇತಾಡುವ ಮಾಂಸದ ತುಂಡು. ಬದಲಿಗೆ, ಅವರು ಕೇವಲ ಮಂದಹಾಸ ಬೀರುತ್ತಿದ್ದರು."

http://sunnah.global/hadeeth/kn/show/3060